ಅ) ಬೆಳಗಾವಿ ಜಿಲ್ಲೆ ಬೈಲಹೊಂಗಲ ತಾಲ್ಲೂಕಿನ ಬೈಲವಾಡ ಗ್ರಾಮದಲ್ಲಿ ಹಾಗೂ ಸವದತ್ತಿ ತಾಲ್ಲೂಕಿನ ತಡಸಲೂರ (ತನಿಕೊಳ್ಳ) ಮತ್ತು ಸುತಗಟ್ಟಿ ಗ್ರಾಮಗಳಲ್ಲಿ ಗ್ರಂಥಾಲಯಗಳನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದೇ;

ಶ್ರೀ ಬಾಬುರಾವ್ ಚವಾಣ್ (ವಯಸ್ಕರ ಶಿಕ್ಷಣ, ಗ್ರಂಥಾಲಯಗಳು, ಮುದ್ರಣ ಮತ್ತು ಲೇಖನ ಸಾಮಗ್ರಿಗಳ ರಾಜ್ಯ ಸಚಿವರು) :

ಅ) 2002-03ನೇ ಸಾಲಿನಲ್ಲಿ ಈ ಕೆಳಕಂಡ ಗ್ರಾಮಗಳಲ್ಲಿ

1) ಬೈಲವಾಡ

2) ತಡಸಲುರ (ತನಿಕೊಳ್ಳ)

3) ಸುತಗಟ್ಟಿ

ಗ್ರಂಥಾಲಯಗಳನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದು.

ಬೈಲಹೊಂಗಲ್ ತಾಲ್ಲೂಕಿನ ಬೆಳವಡಿ ಗ್ರಾಮದಲ್ಲಿ ಸರ್ಕಾರಿ ಡಿಪ್ಲೋಮಾ ಕಾಲೇಜು ಪ್ರಾರಂಭಿಸುವ ಕುರಿತು

67 (81) - ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳಗಾವಿ ಜಿಲ್ಲೆ ಬೈಲಹೊಂಗಲ ತಾಲ್ಲೂಕಿನ ಬೆಳವಾಡಿ ಗ್ರಾಮದಲ್ಲಿ ಡಿಪ್ಲೋಮಾ ಕಾಲೇಜನ್ನು ಪ್ರಾರಂಭಿಸಲು ಪ್ರಸ್ತಾವನೆಯನ್ನು ದಿಲ್ಲಿಯ ಎ.ಐ.ಸಿ.ಟಿ.ಇ ಗೆ ಕಳುಹಿಸಲಾಗಿದೆಯೇ;

ಆ) ಹಾಗಿದ್ದಲ್ಲಿ ಕೂಡಲೇ ಇಲ್ಲಿ ಸರ್ಕಾರಿ ಡಿಪ್ಲೋಮಾ ಕಾಲೇಜಿನ ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದೇ?

ಡಾ॥ ಜಿ. ಪರಮೇಶ್ವರ (ಉನ್ನತ ಶಿಕ್ಷಣ ಸಚಿವರು) :

ಅ) ಹೌದು

ಆ) ಎ.ಐ.ಸಿ.ಟಿ.ಇ ನವದೆಹಲಿರವರಿಂದ ಅನುಮೋದನೆ ಬಂದ ನಂತರ ಈ ಬಗ್ಗೆ ಪರಿಶೀಲಿಸಲಾಗುವುದು.

ರಾಜ್ಯದಲ್ಲಿ ಗೃಹ ನಿರ್ಮಾಣ ಮಂಡಳಿ ಬಗ್ಗೆ

71 (105) - ಶ್ರೀ ಕೃಷ್ಣಪ್ಪ ವಿ. (ದೊಡ್ಡಬಳ್ಳಾಪುರ) : ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಕಳೆದ 3 ವರ್ಷಗಳಿಂದ ಗೃಹ ನಿರ್ಮಾಣ ಮಂಡಳಿಯವರು ಜಿಲ್ಲೆ ಹಾಗೂ ತಾಲ್ಲೂಕು ಮಟ್ಟದಲ್ಲಿ ತೆಗೆದುಕೊಂಡಿರುವ ಕಟ್ಟಡಗಳ ಸಂಖ್ಯೆ ಎಷ್ಟು (ವರ್ಷವಾರು ಮಾಹಿತಿ ನೀಡುವುದು);